ಕರ್ನಾಟಕ ಸರ್ಕಾರ

# ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ: ಕಾಶಿಇ/ನೇವಿ-1/ಅಉನೇ/90/2023-24

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಉನ್ನತ ಶಿಕ್ಷಣ ಸೌಧ,
ಶೇಷಾದ್ರಿ ರಸ್ತೆ, ಬೆಂಗಳೂರು-01.
ದಿನಾಂಕ:21-09-2023

## ಸುತ್ತೋಲೆ

ವಿಷಯ: 2023-24ನೇ ಶೈಕ್ಷಣಿಕ ಸಾಲಿಗೆ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳುವ ಬಗ್ಗೆ.

ಉಲ್ಲೇಖ: 1. ಸರ್ಕಾರದ ಪತ್ರ ಸಂಖ್ಯೆ: ಇಡಿ 171 ಡಿಸಿಇ 2023, ದಿನಾಂಕ:28.08.2023.
2. ಈ ಕಛೇರಿಯ ಇದೇ ಸಮಸಂಖ್ಯೆ ಪ್ರಕಟಣೆ ದಿನಾಂಕ:24.08.2023 & 13.09.2023.
3. ಸರ್ಕಾರದ ಪತ್ರ ಸಂಖ್ಯೆ: ಇಡಿ 171 ಡಿಸಿಇ 2023(ಇ), ದಿನಾಂಕ:13.09.2023.

• • • • • • •

2023-24ನೇ ಶೈಕ್ಷಣಿಕ ಸಾಲಿನಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ (ಸಂಸ್ಕೃತ ಹಾಗೂ ಚಿತ್ರಕಲಾ ಕಾಲೇಜುಗಳೂ ಒಳಗೊಂಡಂತೆ) ಖಾಯಂ ಉಪನ್ಯಾಸಕರಿಗೆ ನಿಯಮಾನುಸಾರ ಕಾರ್ಯಭಾರ ಹಂಚಿಕೆ ಮಾಡಿದ ನಂತರ ಉಳಿಕೆಯಾಗುವ ಬೋಧನಾ ಕಾರ್ಯಭಾರಕ್ಕೆ ಅನುಗುಣವಾಗಿ ಅತಿಥಿ ಉಪನ್ಯಾಸಕರ (ಗ್ರಂಥಪಾಲಕರು ಮತ್ತು ದೈಹಿಕ ಶಿಕ್ಷಣ ಸೇರಿದಂತೆ) ಸೇವೆಯನ್ನು ಬಳಸಿಕೊಳ್ಳುವ ಸಂಬಂದ ಉಲ್ಲೇಖ-(1) ರಲ್ಲಿನ ಸರ್ಕಾರದ ನಿರ್ದೇಶನದ ಮೇರೆಗೆ ಆಯ್ಕೆ ಪ್ರಕ್ರಿಯೆಯನ್ನು ಕೈಗೊಳ್ಳಲಾಗಿದೆ. ಅದರಂತೆ, ಉಲ್ಲೇಖ-(2) ರ ಈ ಕಛೇರಿಯ ಪ್ರಕಟಣೆಗಳಂತೆ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಯನ್ನು ಪಡೆಯಲಾಗಿದೆ. ಅಭ್ಯರ್ಥಿಗಳು ಅರ್ಜಿಯಲ್ಲಿ ನೀಡಿರುವ ಸೇವಾ ಅವಧಿ, ವಿದ್ಯಾರ್ಹತೆ ಇನ್ನಿತರ ವಿವರಗಳ ಆಧಾರದ ಮೇಲೆ ವಿಷಯವಾರು ರಾಜ್ಯವ್ಯಾಪಿ ಮೆರಿಟ್ ಪಟ್ಟಿಯನ್ನು (ಉಳಿಕೆ ಮೂಲ ವೃಂದ ಹಾಗೂ ಕಲ್ಯಾಣ-ಕರ್ನಾಟಕ ಸ್ಥಳೀಯ ವೃಂದ ಪ್ರತ್ಯೇಕವಾಗಿ) ದಿನಾಂಕ:19.09.2023 ರಂದು ಇಲಾಖೆಯ ಅಂತರ್ಜಾಲ ತಾಣ https://dce.karnataka.gov.in ರಲ್ಲಿ ಪ್ರಕಟಿಸಲಾಗಿದೆ.

ಸದರಿ ಮೆರಿಟ್ ಪಟ್ಟಿಯನ್ವಯ ದಿನಾಂಕ:22.09.2023 ರಿಂದ ಆನ್‌ಲೈನ್ ಕೌನ್ಸಿಲಿಂಗ್ ಪ್ರಕ್ರಿಯೆಯನ್ನು ಕೈಗೊಳ್ಳಲಾಗುತ್ತಿದ್ದು, ವಿಷಯವಾರು ಅಗತ್ಯವಿರುವ ಅತಿಥಿ ಉಪನ್ಯಾಸಕರ ತಾತ್ಕಾಲಿಕ ಸಂಖ್ಯಾ ಮಾಹಿತಿ ಹಾಗೂ ವೇಳಾಪಟ್ಟಿಯನ್ನು ಇಲಾಖೆಯ ಅಂತರ್ಜಾಲ ತಾಣದಲ್ಲಿ ಪ್ರಕಟಿಸಲಾಗಿದೆ. ಸದರಿ ಸಂಖ್ಯಾ ಮಾಹಿತಿ ಹಾಗೂ ವೇಳಾಪಟ್ಟಿಯನ್ವಯ ಅಭ್ಯರ್ಥಿಗಳು ಆನ್‌ಲೈನ್ ಕೌನ್ಸಿಲಿಂಗ್‌ನಲ್ಲಿ ಭಾಗವಹಿಸಲು ಈ ಮೂಲಕ ಸೂಚಿಸಲಾಗಿದೆ.

ಮುಂದುವರೆದು, 2023-24ನೇ ಶೈಕ್ಷಣಿಕ ಸಾಲಿನಲ್ಲಿ ಲಭ್ಯವಾಗುವ ಹೆಚ್ಚುವರಿ ಕಾರ್ಯಭಾರಕ್ಕನುಗುಣವಾಗಿ ವಿಷಯವಾರು ಅವಶ್ಯವಿರುವ ಅತಿಥಿ ಉಪನ್ಯಾಸಕರ ಸಂಖ್ಯೆಗೆ ಸಮನಾಗಿ ಮೆರಿಟ್ ಲಿಸ್ಟ್ ಅನ್ನು ಪ್ರಕಟಿಸಲಾಗಿದ್ದು, ಮೆರಿಟ್ ಪ್ರಕಾರ ಕೌನ್ಸಿಲಿಂಗ್ ಮಾಡಲಾಗುವುದು ಹಾಗೂ ಅವಶ್ಯವಿರುವ ಸಂಖ್ಯೆಯಷ್ಟು ಅಭ್ಯರ್ಥಿಗಳಿಗೆ ಮಾತ್ರ ಕೌನ್ಸಿಲಿಂಗ್ ನಡೆಸಲಾಗುವುದು.

. . . . . . 2

ಉಲ್ಲೇಖ-(3) ರ ಸರ್ಕಾರದ ಪತ್ರದಲ್ಲಿ ಅತಿಥಿ ಉಪನ್ಯಾಸಕರ ಆಯ್ಕೆ ಪ್ರಕ್ರಿಯೆಯಲ್ಲಿ ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದ್ರಾಬಾದ್-ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ಆದೇಶ, 2013 ರ ಕಂಡಿಕೆ 3 ಮತ್ತು 13 ರಂತೆ ಅನ್ವಯವಾಗುವ ಮೀಸಲಾತಿ ನಿಗಧಿಪಡಿಸಿ, ಮೀಸಲಾತಿಗೊಳಪಡುವ ಹುದ್ದೆಗಳನ್ನು ಸ್ಥಳೀಯ ವ್ಯಕ್ತಿಗಳಿಂದಲೇ ಭರ್ತಿ ಮಾಡಿಕೊಳ್ಳುವಂತೆ ಸೂಚಿಸಲಾಗಿರುತ್ತದೆ. ಅದರಂತೆ, ಕಲ್ಯಾಣ ಕರ್ನಾಟಕ (ಹೈದ್ರಾಬಾದ್-ಕರ್ನಾಟಕ) ಪ್ರದೇಶಕ್ಕೆ ಒಳಪಡುವ ಕಲಬುರಗಿ, ಬೀದರ್, ರಾಯಚೂರು, ಕೊಪ್ಪಳ, ಬಳ್ಳಾರಿ, ವಿಜಯನಗರ & ಯಾದಗಿರಿ ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಇಲಾಖಾ ವ್ಯಾಪ್ತಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಲಭ್ಯವಾಗುವ ಹೆಚ್ಚುವರಿ ಕಾರ್ಯಭಾರಕ್ಕೆ ಅವಶ್ಯವಿರುವ ಅತಿಥಿ ಉಪನ್ಯಾಸಕರ ಶೇ.75 ರಷ್ಟು ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಲಭ್ಯವಾಗುವ ಹೆಚ್ಚುವರಿ ಕಾರ್ಯಭಾರಕ್ಕೆ ಅವಶ್ಯವಿರುವ ಅತಿಥಿ ಉಪನ್ಯಾಸಕರ ಶೇ.8 ರಷ್ಟು ಕಲ್ಯಾಣ ಕರ್ನಾಟಕ ಸ್ಥಳೀಯ ಅಭ್ಯರ್ಥಿಗಳಿಗೆ ಮೀಸಲಿರಿಸಿ, ಸದರಿ ಅಭ್ಯರ್ಥಿಗಳನ್ನೇ ಆಯ್ಕೆ ಮಾಡಲು ಕ್ರಮವಹಿಸಲಾಗುವುದು.

ಅಭ್ಯರ್ಥಿಗಳು ಆನ್‌ಲೈನ್ ಅರ್ಜಿಯಲ್ಲಿ ತಪ್ಪು ಮಾಹಿತಿ ನೀಡಿದಲ್ಲಿ, ಅಂತಹ ತಪ್ಪು ಮಾಹಿತಿ ಹಾಗೂ ನ್ಯೂನ್ಯತೆಗಳಿಗೆ ಸಂಬಂದಪಟ್ಟ ಅಭ್ಯರ್ಥಿಗಳೇ ಜವಾಬ್ದಾರರಾಗಿರುತ್ತಾರೆ. ಅಲ್ಲದೆ, ಅಭ್ಯರ್ಥಿಗಳು ಅತಿಥಿ ಉಪನ್ಯಾಸಕರ ಆಯ್ಕೆಗೆ ಅವಶ್ಯವಿರುವ ವಿದ್ಯಾರ್ಹತೆಯ ಅಂಕಪಟ್ಟಿ/ಪ್ರಮಾಣ ಪತ್ರಗಳು, ಸೇವಾ ಪ್ರಮಾಣ ಪತ್ರಗಳು, ಅಂಗವಿಕಲತೆಯ ಪ್ರಮಾಣ ಪತ್ರ, ಕಲ್ಯಾಣ ಕರ್ನಾಟಕ ಮೀಸಲಾತಿ ಪ್ರಮಾಣ ಪತ್ರವೂ ಒಳಗೊಂಡಂತೆ ಇನ್ನಿತರ ಅಗತ್ಯ ದಾಖಲೆಗಳನ್ನು ಸಲ್ಲಿಸದೇ ಇದ್ದಲ್ಲಿ ಅಥವಾ ಸಲ್ಲಿಸುವ ದಾಖಲೆಗಳು 'ನಕಲಿ' ಎಂದು ಕಂಡುಬಂದಲ್ಲಿ ಅಂತಹ ಅಭ್ಯರ್ಥಿಗಳ ವಿರುದ್ಧ, ಕಾನೂನು ಕ್ರಮ ಜರುಗಿಸಿ, ಅವರನ್ನು ಅತಿಥಿ ಉಪನ್ಯಾಸಕರ ಆಯ್ಕೆಯಿಂದ ಶಾಶ್ವತವಾಗಿ ಅನರ್ಹಗೊಳಿಸಲಾಗುವುದು ಎಂಬುದಾಗಿ ಮತ್ತೊಮ್ಮೆ ತಿಳಿಸಲಾಗಿದೆ.

"ಮಾನ್ಯ ಆಯುಕ್ತರ ಆದೇಶದ ಮೇರೆಗೆ"

ಮುಖ್ಯ ಆಡಳಿತಾಧಿಕಾರಿ
ಕಾಲೇಜು ಶಿಕ್ಷಣ ಇಲಾಖೆ

<u>ಇವರಿಗೆ:</u>

1) ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರುಗಳಿಗೆ-ಮಾಹಿತಿಗಾಗಿ.
2) ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ. - ಈ ಸುತ್ತೋಲೆಯನ್ನು ತಮ್ಮ ಕಾಲೇಜುಗಳ ನೋಟೀಸ್ ಬೋರ್ಡ್‌ನಲ್ಲಿ ಕಡ್ಡಾಯವಾಗಿ ಪ್ರಕಟಿಸುವುದರೊಂದಿಗೆ, ಆನ್‌ಲೈನ್ ಕೌನ್ಸಿಲಿಂಗ್ ಪ್ರಕ್ರಿಯೆ ಕುರಿತು ಅತಿಥಿ ಉಪನ್ಯಾಸಕ ಅಭ್ಯರ್ಥಿಗಳಿಗೆ ಮಾಹಿತಿಯನ್ನು ನೀಡುವಂತೆ ಸೂಚಿಸಲಾಗಿದೆ.
3) ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕೇಂದ್ರ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು - ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಚಿಸಿದೆ.
4) ಕಛೇರಿ ಪ್ರತಿ